ಶ್ರೀ ಜಿ. ನಾರಾಯಣಕುಮಾರ್ ಅವರಿಗೆ ವಿಧಾನ ಸಭೆಯಂ ಪ್ರಸ್ತುತ ಅಧಿವೇಶನಕ್ಕೆ ಗೈರು ಹಾಜರಾಗಲು ಕೊಡಬೇಕೆಂದು ಸದನವು ಅಪೇಕ್ಷಿಸುತ್ತದೆಯೇ ?

(ಯಾವ ಸದಸ್ಯರೂ ವಿರೋಧ ವ್ಯಕ್ತಪಡಿಸಲಿಲ್ಲ)

ಅಧ್ಯಕ್ಷರು.—ಗೈರು ಹಾಜರಾಗಲು ಶ್ರೀ ಜಿ. ನಾರಾಯಣಕುಮಾರ್ ಅವರಿಗೆ ಅನುಮತಿ ನೀಡಲಾಗಿದೆ.

ಪ್ರಕಟಣೆ

ಸದಸ್ಯರ ಬಂಧನ ಮತ್ತು ಬಿಡುಗಡೆ

ಅಧ್ಯಕ್ಷರು.— ಮತ್ತೊಂದು ಪ್ರಕಟಣೆ ಇದೆ. —

"ವಿಧಾನಸಭಾ ಸದಸ್ಯರಾದ ಶ್ರೀಮತಿ ಮುಕ್ತರುನ್ನೀಸರವನ್ನು ದಿನಾಂಕ ೧೫–೩–೮೮ ರಂದು ಬೆಳಿಗ್ಗೆ ೧೦–೩೦ ಗಂಟೆಗೆ ಮೈಸೂರಿನಲ್ಲಿ ಬಂಧಿಸಿ ಅದೇ ದಿನ ಸಾಯಂಕಾಲ ೬–೩೦ ಗಂಟೆಗೆ ಬಿಡುಗಡೆ ಮಾಡಲಾಯಿತೆಂದು ಡೆಪ್ಯೂಟಿ ಸೂಪರಿಂಟೆಂಡೆಂಟ್ ಆಫ್ ಪೋಲೀಸ್ ಮೈಸೂರು. ಅವರಿಂದ ನಮಗೆ ಸಂದೇಶ ಬಂದಿದೆ.

ವಿಧಾನಸಭಾ ಸದಸ್ಯರಾದ ಶ್ರೀ ಬಾಬುರೆಡ್ಡಿ ವಿ. ತುಂಗಳ್ ಅವರನ್ನು ದಿನಾಂಕ ೬–೩–೮೮ ರಂದು ಬೆಳಿಗ್ಗೆ ೧೧–೩೦ ಗಂಟೆಗೆ ಬೆಳಗಾಂನಲ್ಲಿ ಬಂಧಿಸಲಾಗಿದೆ ಎಂದು ಡೆಪ್ಯೂಟಿ ಸೂಪರಿಂಟೆಂಡೆಂಟ್ ಆಫ್ ಪೋಲೀಸ್, ಬೆಳಗಾಂ, ಇವರಿಂದ ನನಗೆ ಸಂದೇಶ ಬಂದಿದೆ.

ನಿಲುವಳಿ ಸೂಚನೆಗಳ ಪ್ರಸ್ತಾವ (ಅನುಮತಿ ಕೋರಿಕೆ)

ಶ್ರೀ ಆರ್. ವೆಂಕಟರಾವಯ್ಯ.—ಮಾನ್ಯ ಅಧ್ಯಕ್ಷರೇ, ನಾನು ತಮಗೆ ಒಂದು ನಿಲುವಳಿ ಸೂಚನೆಯನ್ನು ಕಳುಹಿಸಿಕೊಟ್ಟಿದ್ದೇನೆ. ಅದರ ಬಗ್ಗೆ ಮಾತನಾಡಲು ತಾವು ನನಗೆ ಅವಕಾಶ ಮಾಡಿ ಕೊಡಬೇಕು.

ಅಧ್ಯಕ್ಷರು.—ಅದನ್ನು ರಿಜೆಕ್ಟ್ ಮಾಡಲಾಗಿದೆ ಎಂದು ತಮಗೆ ತಿಳಿಸಿದ್ದೇನೆ. ಆದ್ದರಿಂದ ತಾವು ಈಗ ಏನು ಹೇಳಿದರೂ ಸಹ ಅದು ರೆಕಾರ್ಡ್‌ಗೆ ಹೋಗುವುದಿಲ್ಲ.

ಶ್ರೀ ಆರ್. ವೆಂಕಟರಾಮಯ್ಯ.—ಇದು ಬಹಳ ಮುಖ್ಯವಾದ ವಿಚಾರ. ಇದಕ್ಕೆ ಮಾನ್ಯ ಮುಖ್ಯ ಮಂತ್ರಿಗಳು ಉತ್ತರವನ್ನಾದರೂ ಕೊಡಲಿ.

ಶ್ರೀ ಎಸ್. ಆರ್. ಬೊಮ್ಮಾಯಿ.—ಮಾನ್ಯ ಅಧ್ಯಕ್ಷರು ತಮ್ಮ ನಿಲುವಳಿ ಸೂಚನೆಯನ್ನು ರಿಜೆಕ್ಟ್ ಮಾಡಿದ್ದೇನೆಂದು ಅವರ ಛೇಂಬರ್‌ಗೆ ತಮ್ಮನ್ನು ಕರೆಯಿಸಿಕೊಂಡು ಹೇಳಿದ್ದಾರೆ. ಆದ್ದರಿಂದ ತಾವು ಬೇರೆ ರೂಪದಲ್ಲಿ ಈ ಬಗ್ಗೆ ಪ್ರಶ್ನೆ ಕೇಳಿ.

ಶ್ರೀ ಆರ್. ವೆಂಕಟರಾಮಯ್ಯ.—ನಾನು ತಮ್ಮ ತೀರ್ಮಾನವನ್ನು ಪ್ರಶ್ನೆ ಮಾಡುವುದಿಲ್ಲ.

ಅಧ್ಯಕ್ಷರು.—ನೀವು ಏನು ಹೇಳಿದರೂ ಅದು ರೆಕಾರ್ಡ್ ಆಗುವುದಿಲ್ಲ.

ಶ್ರೀ ಎಸ್. ಆರ್. ಬೊಮ್ಮಾಯಿ.—ನೀವು ಕೊಟ್ಟಿರುವ ನಿಲುವಳಿಯ ಸೂಚನೆಯನ್ನು ಮಾನ್ಯ ಅಧ್ಯಕ್ಷರು ರಿಜೆಕ್ಟ್ ಮಾಡಿದ್ದಾರೆ. ಈ ಬಗ್ಗೆ ನೀವು ಇಲ್ಲಿ ಪ್ರಸ್ತಾಪ ಮಾಡಬಾರದೆಂದು ನಾನು ಹೇಳುವುದಿಲ್ಲ. ನೀವು ನಿಲುವಳಿ ಸೂಚನೆಯನ್ನು ಬಿಟ್ಟು ಬೇರೆ ರೂಪದಲ್ಲಿ ಪ್ರಸ್ತಾಪ ಮಾಡಿದರೆ ಮುಖ್ಯ ಮಂತ್ರಿಗಳು ಉತ್ತರ ಕೊಡುತ್ತಾರೆ. ಇಲ್ಲಿ ಇದನ್ನು ಪ್ರಸ್ತಾಪ ಮಾಡಲು ಬೇರೆ ನಿಯಮಗಳು ಸಹ ಇವೆ.

ಶ್ರೀ ಎಂ. ವೀರಪ್ಪ ಮೊಯಿಲಿ.—ಮಾನ್ಯ ಮುಖ್ಯ ಮಂತ್ರಿಗಳು ಇಲ್ಲಿಯವರೆಗೆ ಇದರ ಬಗ್ಗೆ ಏತಕ್ಕೆ ಉತ್ತರ ಕೊಡಲಿಲ್ಲವೆಂದು ಅವರು ಹೇಳುತ್ತಿದ್ದಾರೆ. ಆ ರೀತಿ ಕೇಳುವುದು ತಪ್ಪೇ ?